4. ಶಾಸನ ರಚನೆ

1. ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕ 2007 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, 2007 ರ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ;

"2007 ರ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, 2007 ರ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ

ಅಂಗೀಕರಿಸುವುದು

ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರೆ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕ, 2007 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, 2007 ರ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು:– ವಿಧೇಯಕದ ಬಗ್ಗೆ ವಿವರಗಳನ್ನು ಸಭೆಗೆ ತಿಳಿಸಿ.

ಶ್ರೀ ಎಂ.ಪಿ.ಪ್ರಕಾಶ್:– ಸನ್ಮಾನ್ಯ ಅಧ್ಯಕ್ಷರೆ,...

ಶ್ರೀ ಜೆ.ಸಿ.ಮಾಧುಸ್ವಾಮಿ:– ಮಾನ್ಯ ಅಧ್ಯಕ್ಷರೆ, ಈ ವಿಧೇಯಕದ ಮೇಲೆ ಚರ್ಚೆ ಮಾಡುವ ಅಗತ್ಯವಿಲ್ಲವೆಂದು ಕಾಣುತ್ತದೆ. ಆದ ಕಾರಣ ಈ ವಿಧೇಯಕವನ್ನು ಚರ್ಚೆಯಿಲ್ಲದೆ ಪಾಸ್ ಮಾಡಬಹುದು ಎಂದು ನನ್ನ ಅಭಿಪ್ರಾಯ.

ಶ್ರೀ ಎಂ.ಪಿ.ಪ್ರಕಾಶ್:– ಮಾನ್ಯ ಅಧ್ಯಕ್ಷರೆ, ನಾನು ಇಡೀ ಸದನಕ್ಕೆ ಧನ್ಯವಾದಗಳನ್ನರ್ಪಿಸುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ;

"2007 ರ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 5 ರವರೆಗೆ

ಅಧ್ಯಕ್ಷರು:– "ಖಂಡ 2 ರಿಂದ 5 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 5 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆಗಳು, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳು ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆಗಳು, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, 2007 ರ ಉಚ್ಚ ನ್ಯಾಯಾಲಯ ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ;

"2007 ರ ಉಚ್ಚ ನ್ಯಾಯಾಲಯ ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(ಅನುಬಂಧ–6)

1.ಚಿಟ್‌ಫಂಡುಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2007 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ.ಟಿ.ದೇವೇಗೌಡ (ಸಹಕಾರ ಸಚಿವರು):– ಮಾನ್ಯ ಅಧ್ಯಕ್ಷರೆ, 2007ರ ಚಿಟ್‌ಫಂಡುಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ ;

"2007 ರ ಚಿಟ್‌ಫಂಡುಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜಿ.ಟಿ.ದೇವೇಗೌಡ (ಸಹಕಾರ ಸಚಿವರು):– ಮಾನ್ಯ ಅಧ್ಯಕ್ಷರೆ, 2007 ರ ಚಿಟ್‌ಫಂಡುಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಶ್ರೀ ವಾಟಾಳ್ ನಾಗರಾಜ್:– ಮಾನ್ಯ ಅಧ್ಯಕ್ಷರೆ, ನಮಗೆ ಬಿಲ್ ಕಾಪಿಯನ್ನೇ ಕೊಟ್ಟಿಲ್ಲ. ಹೀಗಿರುವಾಗ ಅದರ ಮೇಲೆ ಚರ್ಚೆ ಹೇಗೆ ಮಾಡುವುದು?

ಶ್ರೀ ಜೆ.ಸಿ.ಮಾಧುಸ್ವಾಮಿ:– ಬಿಲ್ ಕಾಪಿ ಸರ್ಕ್ಯುಲೇಟ್ ಮಾಡಿ.

ಅಧ್ಯಕ್ಷರು:– ಬಿಲ್ ಕಾಪಿ ಸರ್ಕ್ಯುಲೇಟ್ ಮಾಡಿದ್ದೀರೇನಪ್ಪಾ?